ಆ) ಸದರಿ ಕಾಮಗಾರಿಯನ್ನು ಫೆಬ್ರವರಿ 1998 ರಲ್ಲಿ ಪ್ರಾರಂಭಿಸಲಾಗಿದ್ದು ಮಾರ್ಚ್ 2001 ರೊಳಗೆ ಪೂರ್ಣಗೊಳಿಸಲಾಗುವುದು.

ಇ) ಇದುವರೆವಿಗೂ ಕಟ್ಟಡಕ್ಕೆ ಒಟ್ಟು ರೂ.130 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಈ) ಕಾಲಮಿತಿಯಂತೆ ಈ ಕಟ್ಟಡವನ್ನು ಮಾರ್ಚ್ 2001 ರೊಳಗೆ ಪೂರ್ಣಗೊಳಿಸಲಾಗುವುದು.

ಬೆಳ್ತಂಗಡಿಯಲ್ಲಿನ ಶಿಕ್ಷಣಾಧಿಕಾರಿಗಳ ಕಛೇರಿ ಕಟ್ಟಡ ಕುರಿತು

1992 (2332) ಶ್ರೀ ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಳ್ತಂಗಡಿಯಲ್ಲಿ ಶಿಕ್ಷಣಾಧಿಕಾರಿಗಳ ಕಛೇರಿ ಕಟ್ಟಡವು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಅದರ ದುರಸ್ತಿ ಕಾರ್ಯವನ್ನು ಎಂದಿನಿಂದ.....?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ದುರಸ್ತಿ ಕಾರ್ಯವನ್ನು ತುರ್ತಾಗಿ ಕೈಗೊಳ್ಳಲು ಸಂಬಂಧಿಸಿದ ಜಿಲ್ಲಾಪಂಚಾಯತ್‌ಗೆ ಸೂಚನೆ ನೀಡಿದೆ.

ಬೆಳ್ತಂಗಡಿಯಲ್ಲಿನ ಪ್ರಥಮ ದರ್ಜೆ ಕಾಲೇಜಿಗೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳು

1994 (2334) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಳ್ತಂಗಡಿಯಲ್ಲಿನ ಪ್ರಥಮ ದರ್ಜೆ ಕಾಲೇಜಿಗೆ ಮಂಜೂರಾದ ಬೋಧಕ : ಬೋಧಕೇತರ ಹುದ್ದೆಗಳೆಷ್ಟು;

ಆ) ಅದರ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು;

ಇ) ಖಾಲಿ ಹುದ್ದೆಗಳನ್ನು ಎಂದು ತುಂಬಲಾಗುವುದು?

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಬೋಧಕರು .. 10
ಬೋಧಕೇತರರು .. 06

ಅ) ಬೋಧಕ ಹುದ್ದೆಗಳು .. 04
ಬೋಧಕೇತರ ಹುದ್ದೆಗಳು .. ಖಾಲಿ ಇಲ್ಲ.

ಇ) ಸಂಬಂಧಿಸಿದ ವಿಷಯಗಳಲ್ಲಿನ ಉಪನ್ಯಾಸಕರ ಹುದ್ದೆಗಳನ್ನು ವರ್ಗಾವಣೆ ಅಥವಾ ನೇಮಕಾತಿ ಮೂಲಕ ತುಂಬಲು ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು.

ಬೆಂಗಳೂರು ನಗರದಲ್ಲಿ ಹೆಪಿಟೈಟೀಸ್ ಬಿವ್ಯಾಕ್ಸೀನ್ ಕ್ಯಾಂಪ್‌ಗಳು

1995 (2207) ಶ್ರೀ ರಾಮುಲಿಂಗ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಖಾಸಗಿ ಸಂಸ್ಥೆಗಳು ಹೆಪಿಟೈಟೀನ್ 'ಬಿ' ವ್ಯಾಕ್ಸೀನ್ ಬಗ್ಗೆ ಕ್ಯಾಂಪುಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಜನತೆಗೆ ಇದರ ಭೀತಿ ಹುಟ್ಟಿಸಿ ಪ್ರತಿ ಒಂದು ಡೋಸ್ ವ್ಯಾಕ್ಸೀನ್‌ಗೆ 200 ರಿಂದ 300 ರೂ. ಗಳನ್ನು ವಸೂಲು ಮಾಡುತ್ತಿರುವುದು ನಿಜವಲ್ಲವೆ;

ಇ) ಜನತೆಯಲ್ಲಿ ಈ ರೋಗದ ಬಗ್ಗೆ ಭೀತಿ ಹುಟ್ಟಿಸುವುದನ್ನು ತಡೆಗಟ್ಟಲು ಹಾಗೂ ಈ ವ್ಯಾಕ್ಸೀನ್‌ನ್ನು ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಕಡಿಮೆ ದರದಲ್ಲಿ ನೀಡಲು ಸರ್ಕಾರ ಉದ್ದೇಶಿಸಿದೆಯೇ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಭೀತಿ ಹುಟ್ಟಿಸಿರುವ ವಿಷಯ ಗಮನಕ್ಕೆ ಬಂದಿರುವುದಿಲ್ಲ. ಆದರೆ ವಯಸ್ಕರಿಗೆ ಪ್ರತಿ ಡೋಸ್‌ಗೆ 200 ರಿಂದ 300 ರೂ.ಗಳನ್ನು ವಸೂಲು ಮಾಡುತ್ತಿರುವುದು ನಿಜ.

ಇ) ರಾಷ್ಟ್ರೀಯ ರಾಜ್ಯ ಮಟ್ಟದ ರೋಗ ನಿರೋಧಕ ಲಸಿಕೆ ನೀಡುವ ಕಾರ್ಯಕ್ರಮಗಳಲ್ಲಿ ಹೆಪಟೈಟೀಸ್ 'ಬಿ' ವ್ಯಾಕ್ಸೀನ್ ಸೇರಿರುವುದಿಲ್ಲ.

ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಆಯುರ್ವೇದ ಮತ್ತು ಹೋಮಿಯೋಪತಿ ಕಾಲೇಜುಗಳು

1996 (2208) ಶ್ರೀ ರಾಮುಲಿಂಗ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಆಯುರ್ವೇದ ಮತ್ತು ಹೋಮಿಯೋಪತಿ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಹೊಸದಾಗಿ ಆಯುರ್ವೇದ ಹಾಗೂ ಹೋಮಿಯೋಪತಿ ಕಾಲೇಜುಗಳನ್ನು ತೆರೆಯಲು ಇಲ್ಲಿಯವರೆಗೆ ಸರ್ಕಾರಕ್ಕೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು;